# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ**: ತಡವಾಗಿ ಪಾವತಿಯಾದ ಪಿಂಚಣಿ, ಉಪದಾನ ಹಾಗೂ ಗಳಿಕೆ ರಜೆ ನಗದೀಕರಣ ಇವುಗಳ ಮೇಲಿನ ಬಡ್ಡಿದರವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ**:

1. ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 199 ಪಿಇಎನ್ 1993, ದಿನಾಂಕ: 13.09.1994.
2. ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 01 ಪಿಇಎನ್ 2003, ದಿನಾಂಕ: 21.08.2003.

**ಪ್ರಸ್ತಾವನೆ**:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ ನಿವೃತ್ತ ಸರ್ಕಾರಿ ನೌಕರರಿಗೆ ಅಥವಾ ಅವರು ಸೇವೆಯಲ್ಲಿರುವಾಗ ಮರಣ ಹೊಂದಿದ್ದಲ್ಲಿ ಮತ್ತು ನಿವೃತ್ತಿ ನಂತರ ಮರಣ ಹೊಂದಿದ್ದಲ್ಲಿ ಅವರ ಕುಟುಂಬಕ್ಕೆ ಲಭ್ಯವಾಗುವ ನಿವೃತ್ತಿ ವೇತನ/ಮರಣೋತ್ತರ ಸೌಲಭ್ಯಗಳಿಗೆ ವಾರ್ಷಿಕ ಶೇ.12 ರ ದರದಲ್ಲಿ ಷರತ್ತು-ನಿಬಂಧನೆಗಳೊಂದಿಗೆ ಪಾವತಿಸಲು ಆದೇಶಿಸಲಾಗಿದೆ. ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಸದರಿ ಬಡ್ಡಿ ದರವನ್ನು ಶೇ.8 ರ ದರದಲ್ಲಿ ಪರಿಷ್ಕರಿಸಿ ಆದೇಶಿಸಲಾಗಿದೆ.

ಇತ್ತೀಚಿನ ವರ್ಷಗಳಲ್ಲಿ ಅನೇಕ ಕಾರಣಗಳಿಂದಾಗಿ ಆರ್ಥಿಕ ಕ್ಷೇತ್ರದಲ್ಲಿ ಬಡ್ಡಿಯ ದರವು ಇಳಿಮುಖವಾಗಿರುತ್ತದೆ. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ನಿಶ್ಚಿತ ಠೇವಣಿಯ ಮೇಲಿನ ಬಡ್ಡಿದರವು ಗರಿಷ್ಠ ಶೇ.5.4 ರಷ್ಟು ಹಾಗೂ ಜಿ.ಪಿ.ಎಫ್. ಬಡ್ಡಿದರವು ಶೇ.7.1 ರಷ್ಟಿರುತ್ತದೆ. ಈ ಹಿನ್ನೆಲೆಯಲ್ಲಿ ವಿಳಂಬವಾಗಿ ಪಾವತಿಸಲ್ಪಡುವ ನಿವೃತ್ತಿ/ಮರಣೋತ್ತರ ಸೌಲಭ್ಯಗಳ ಮೇಲೆ ನಿಗದಿಪಡಿಸಲಾದ ವಾರ್ಷಿಕ ಬಡ್ಡಿಯ ದರವನ್ನು ಪರಿಷ್ಕರಿಸಲು ತೀರ್ಮಾನಿಸಲಾಯಿತು.

ವಿಳಂಬವಾಗಿ ಪಾವತಿಸಲ್ಪಡುವ ನಿವೃತ್ತಿ/ಮರಣೋತ್ತರ ಸೌಲಭ್ಯಗಳಿಗೆ ಹಾಲಿ ಚಾಲ್ತಿಯಲ್ಲಿರುವ ಬಡ್ಡಿಯ ದರವನ್ನು ವಾರ್ಷಿಕ ಶೇ. 8 ರಿಂದ ಶೇ. 5.4ಕ್ಕೆ ಇಳಿಸಿ ಪರಿಷ್ಕರಿಸುವುದು ಸಮಂಜಸವೆಂದು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ: ಆಇ 211 ಪಿಇಎನ್ 2021, ಬೆಂಗಳೂರು, ದಿನಾಂಕ: 22.02.2022.</u>

ವಿಳಂಬವಾಗಿ ಪಾವತಿಸಲ್ಪಡುವ ನಿವೃತ್ತಿ/ಮರಣೋತ್ತರ ಸೌಲಭ್ಯಗಳ ಮೇಲೆ ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 01 ಪಿಇಎನ್ 2003, ದಿನಾಂಕ: 21.08.2003 ರಲ್ಲಿ ನೀಡುತ್ತಿದ್ದ ಶೇ.8 ರ ಬಡ್ಡಿದರವನ್ನು ಪರಿಷ್ಕರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಶೇ.5.4ರ ದರಕ್ಕೆ ನಿಗದಿಪಡಿಸಿ ಆದೇಶಿಸಿದೆ.

...2..

2. ಈ ಸರ್ಕಾರಿ ಆದೇಶದ ದಿನಾಂಕ:22.02.2022ರ ಮೊದಲು ನಿವೃತ್ತಿ ಹೊಂದಿದ ನಿವೃತ್ತಿದಾರರ ನಿವೃತ್ತಿ ಸೌಲಭ್ಯಗಳು ಪಾವತಿಯಾಗದೇ ಉಳಿದಿದ್ದು ಅಥವಾ ದಿನಾಂಕ: 22.02.2022ರ ನಂತರ ಪಾವತಿಯಾದ ನಿವೃತ್ತಿದಾರರ ನಿವೃತ್ತಿ ವೇತನ ಪ್ರಕರಣಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 199 ಪಿಇಎನ್ 1993, ದಿನಾಂಕ: 13.09.1994 ಮತ್ತು ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 01 ಪಿಇಎನ್ 2003, ದಿನಾಂಕ: 21.08.2003ಗಳಲ್ಲಿ ನಿಗದಿಪಡಿಸಿರುವ ದರಗಳಲ್ಲಿ ಅನ್ವಯಿಸುವ ಬಡ್ಡಿಯನ್ನು ದಿನಾಂಕ: 13.09.1994 ರಿಂದ ದಿನಾಂಕ: 21.02.2022ರವರೆಗಿನ ಅವಧಿಗೆ ಲೆಕ್ಕ ಹಾಕಿ ಪಾವತಿ ಮಾಡತಕ್ಕದ್ದು.

3. ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 199 ಪಿಇಎನ್ 1993, ದಿನಾಂಕ: 13.09.1994ರಲ್ಲಿ ನಿಗದಿಪಡಿಸಿರುವ ಷರತ್ತು-ನಿಬಂಧನೆಗಳು ಮುಂದುವರೆಯುತ್ತವೆ. ಈ ಪರಿಷ್ಕೃತ ಬಡ್ಡಿದರವು ದಿನಾಂಕ: 22.02.2022ರ ಒಳಗಾಗಿ ನಿವೃತ್ತಿ ಹೊಂದಿ ಮೇಲಿನ ಕಂಡಿಕೆ 2ರನ್ವಯ ಮುಕ್ತಾಯಗೊಂಡ ನಿವೃತ್ತಿ ವೇತನದ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ ಮತ್ತು ಅಂತಹ ಪ್ರಕರಣಗಳನ್ನು ಪುನರ್ ಪರಿಗಣಿಸಲಾಗುವುದಿಲ್ಲ ಎಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕುಮಟಾ ಪ್ರಕಾಶ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ ಮತ್ತು
ಆರ್ಥಿಕ ಆಯೋಗ ಕೋಶ).
22/02/2022

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ.

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಜಿ.ಎಂ. ಶಾಖೆ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
5. ಆಯುಕ್ತರು, ಖಜಾನೆ ಆಯುಕ್ತಾಲಯ, 5 ಮತ್ತು 6ನೇ ಮಹಡಿ, ಕೆ.ಪಿ.ಸಿ.ಎಲ್. ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

...3..

9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
14. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು ಮತ್ತು ಎಲ್ಲಾ ಜಿಲ್ಲಾ ಖಜಾನೆಗಳು.
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ.
16. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ, ವಿಧಾನ ಸೌಧ, ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಂತರ್ಜಾಲತಾಣ:

www.finance.karnataka.gov.in ವೀಕ್ಷಿಸಿ